ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 11–10–2021

## ಮಾಧ್ಯಮ ಆಹ್ವಾನ
## Media Invitation

1. ರಾಜ್ಯ ಎನ್.ಎಸ್.ಎಸ್.ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ(ನಿಮ್ಹಾನ್ಸ್) ಇವರ ಸಹಯೋಗದಲ್ಲಿ –
   ಎನ್.ಎಸ್.ಎಸ್. ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಎನ್.ಎಸ್.ಎಸ್. ಸ್ವಯಂ ಸೇವಕರ ನೋಂದಣಿ ಜಾಲತಾಣ (ವೆಬ್‌ಸೈಟ್) ಲೋಕಾರ್ಪಣೆ:

ಕಾರ್ಯಕ್ರಮಕ್ಕೆ ಚಾಲನೆ:
ಡಾ.ಕೆ.ಸಿ. ನಾರಾಯಣಗೌಡ
ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ರೇಷ್ಮೆ ಸಚಿವರು, ಕರ್ನಾಟಕ ಸರ್ಕಾರ

ಗೌರವ ಅತಿಥಿಗಳು:
ಡಾ. ಸಿ.ಎನ್.ಅಶ್ವಥ್ ನಾರಾಯಣ್
ಮಾನ್ಯ ಉನ್ನತ ಶಿಕ್ಷಣ, ಐ.ಟಿ ಮತ್ತು ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವರು, ಕರ್ನಾಟಕ ಸರ್ಕಾರ.

ಮುಖ್ಯ ಅತಿಥಿಗಳು:
ಪಿ.ಸಿ.ಮೋಹನ್
ಮಾನ್ಯ ಸಂಸದರು, ಬೆಂಗಳೂರು ಕೇಂದ್ರ ವಲಯ.

ಅಧ್ಯಕ್ಷತೆ :
ರಿಜ್ವಾನ್ ಅರ್ಷದ್,
ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ

ದಿನಾಂಕ: 12–10–2021 ಮಂಗಳವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಯವನಿಕ ಸಭಾಂಗಣ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು.

**2. ಇ– ಆಡಳಿತ ಕೇಂದ್ರ ಉನ್ನತೀಕರಿಸಿದ ಮಾಹಿತಿ ಕಣಜ ಪೋರ್ಟಲ್ ಯೋಜನೆ ಕುರಿತು ಪತ್ರಿಕಾ ಗೋಷ್ಠಿ :**

**ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ)**

**ದಿನಾಂಕ: 12–10–2021 ಮಂಗಳವಾರ, ಸಮಯ: ಮಧ್ಯಾಹ್ನ 4.00 ಗಂಟೆಗೆ**

**ಸ್ಥಳ: ಕೊಠಡಿ ಸಂ 104, ಮೊದಲನೇ ಮಹಡಿ, ಬಹುಮಹಡಿ ಕಟ್ಟಡ (ಎಂ.ಎಸ್. ಬಿಲ್ಡಿಂಗ್), ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**PRESS RELEASE**

## ಕರ್ನಾಟಕ ಉಚ್ಛ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳು ಪ್ರಮಾಣ ವಚನ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

ಕರ್ನಾಟಕ ಉಚ್ಛನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾಗಿ ಅಲಹಾಬಾದ್ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿದ್ದ, ಗೌರವಾನ್ವಿತ ನ್ಯಾಯಮೂರ್ತಿ ರಿತು ರಾಜ್ ಅವಸ್ಥಿ ಅವರು ಇಂದು ಪ್ರಮಾಣ ವಚನ ಸ್ವೀಕರಿಸಿದರು.

ರಾಜಭವನದ ಗಾಜಿನ ಮನೆಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಘನತೆವೆತ್ತ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಪ್ರಮಾಣ ವಚನ ಬೋಧಿಸಿದರು.

ಸಮಾರಂಭದಲ್ಲಿ ಮುಖ್ಯಮಂತ್ರಿಗಳಾದ ಬಸವರಾಜ ಎಸ್ ಬೊಮ್ಮಾಯಿ, ಸಚಿವರುಗಳಾದ ಗೋವಿಂದ ಎಂ ಕಾರಜೋಳ, ಬಿ.ಸಿ.ಪಾಟೀಲ್, ಮಾಜಿ ಮುಖ್ಯಮಂತ್ರಿಗಳು ಹಾಗೂ ವಿರೋಧ ಪಕ್ಷದ ನಾಯಕರಾದ ಸಿದ್ದರಾಮಯ್ಯ, ರಾಜ್ಯದ ಮುಖ್ಯಕಾರ್ಯದರ್ಶಿ ಪಿ.ರವಿಕುಮಾರ್ ಸೇರಿದಂತೆ ಹಲವು ಗಣ್ಯರು, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಟೋಕಿಯೋ ಒಲಂಪಿಕ್ಸ್ ಹಾಗೂ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆ ಸನ್ಮಾನ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

ಭಾರತದ ಕ್ರೀಡಾಪಟುಗಳು ಟೋಕಿಯೋ ಒಲಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್‌ನಲ್ಲಿ ಅಪೂರ್ವ ಸಾಧನೆಯನ್ನು ದಾಖಲಿಸುವ ಮೂಲಕ ದೇಶಕ್ಕೆ ಕೀರ್ತಿ ತಂದಿದ್ದಾರೆ. ಅದೇ ರೀತಿ ಕರ್ನಾಟಕದ ಕ್ರೀಡಾಪಟುಗಳು ಉತ್ತಮ ಸಾಧನೆಯನ್ನು ದಾಖಲಿಸಿ, ರಾಜ್ಯದ ಯುವ ಕ್ರೀಡಪಟುಗಳಿಗೆ ಮಾದರಿಯಾಗಿದ್ದಾರೆ.

ಘನತೆವೆತ್ತ ರಾಜ್ಯಪಾಲರು, ತಮ್ಮ ವಿವೇಚನಾ ನಿಧಿಯಿಂದ ಪ್ಯಾರಾಲಿಂಪಿಕ್ಸ್ ನಲ್ಲಿ ಭಾಗವಹಿಸಿದ ಕು. ಶಕೀನ್ ಖಾತೂನ್ (ಪ್ಯಾರಾ ಪವರ್ ಲಿಫ್ಟಿಂಗ್) ಮತ್ತು ಶ್ರೀ ನಿರಂಜನ್ ಮುಕುಂದನ್ (ಪ್ಯಾರಾ ಈಜು) ಶ್ರೀ ಸುಹಾಸ್ ಎಲ್ ಯತಿರಾಜ್

(ಟೋಕಿಯೋ ಪ್ಯಾರಾಲಿಂಪಿಕ್ಸ್ ನಲ್ಲಿ ಬ್ಯಾಡ್ಮಿಂಟನ್‌ನಲ್ಲಿ ರಜತ ಪದಕ ವಿಜೇತ) ಹಾಗೂ ಟೋಕಿಯೋ ಒಲಂಪಿಕ್ಸ್ – 2020ರಲ್ಲಿ ಬಾಕ್ಸಿಂಗ್ ತಂಡದ ತರಬೇತುದಾರರಾಗಿ ಕಾರ್ಯ ನಿರ್ವಹಿಸಿದ ಶ್ರೀ ಸುಬೇದಾರ್ ಸಿ.ಎ. ಕುಟ್ಟಪ್ಪ ಹಾಗೂ ಸೈಲಿಂಗ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದ ಶ್ರೀ ಕೆ.ಸಿ. ಗಣಪತಿ ಇವರುಗಳಿಗೆ ತಲಾ 1.00 ಲಕ್ಷ ರೂ ಪ್ರೋತ್ಸಾಹಧನ ನೀಡಿ ಈ ದಿನ ಕ್ರೀಡಾಪಟುಗಳಿಗೆ ಸನ್ಮಾನ ಮಾಡಲಾಯಿತು.

ಘನತೆವೆತ್ತ ರಾಜ್ಯಪಾಲರು ತಮ್ಮ ವಿವೇಚನಾ ನಿಧಿಯಿಂದ ದಿನಾಂಕ: 03–09–2021ರಂದು ರಾಜಭವನದಲ್ಲಿ ನಡೆದ ಸನ್ಮಾನ ಸಮಾರಂಭದಲ್ಲಿ ಟೋಕಿಯೋ ಒಲಂಪಿಕ್ಸ್–2020ರಲ್ಲಿ ಭಾವಹಿಸಿದ ಕು. ಅದಿತಿ ಅಶೋಕ್ (ಗಾಲ್ಫ್) ಶ್ರೀ ಶ್ರೀಹರಿ ನಟರಾಜ್ (ಈಜು) ಮತ್ತು ಶ್ರೀ ಫವ್ವಾದ್ ಮಿಜಾ (ಈಕ್ವೆಸ್ಟ್ರಿಯನ್) ಹಾಗೂ ಭಾರತೀಯ ಮಹಿಳಾ ಹಾಕಿ ತಂಡದ ಸಹಾಯಕ ತರಬೇತುದಾರರಾಗಿ ಕೆಲಸ ನಿರ್ವಹಿಸಿದ ಶ್ರೀಮತಿ ಅಂಕಿತಾ ಬಿ.ಎಸ್. ಇವರುಗಳಿಗೆ ತಲಾ 1.00 ಲಕ್ಷಗಳ ಪ್ರೋತ್ಸಾಹಧನವನ್ನು ನೀಡಿ ಗೌರವಿಸಿರುತ್ತಾರೆ.

ಕ್ರೀಡಾಪಟುಗಳನ್ನು ಉತ್ತೇಜಿಸಲು ಘನತೆವೆತ್ತ ರಾಜ್ಯಪಾಲರು ಕೈಗೊಂಡಿರುವ ಈ ಕ್ರಮ ಅಪೂರ್ವ ಮತ್ತು ಅನನ್ಯವಾಗಿದ್ದು, ಕ್ರೀಡಾಪಟುಗಳು ರಾಜ್ಯಪಾಲರಿಗೆ ಕೃತಜ್ಞತೆಗಳನ್ನು ಸಲ್ಲಿಸಿದರು.

ಟೋಕಿಯೋ ಒಲಂಪಿಕ್ಸ್‌ನಲ್ಲಿ ಭಾಗವಹಿಸಿದ ರಾಜ್ಯದ ಕ್ರೀಡಾಪಟುಗಳಾದ ಕು. ಅದಿತಿ ಅಶೋಕ್ (ಗಾಲ್ಫ್) ಶ್ರೀ ಶ್ರೀಹರಿ ನಟರಾಜ್ (ಈಜು) ಮತ್ತು ಶ್ರೀ ಫವ್ವಾದ್ ಮಿಜಾ (ಈಕ್ವೆಸ್ಟ್ರಿಯನ್) ಹಾಗೂ ಟೋಕಿಯೋ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಿದ ಕು. ಶಕೀನ್ ಖಾತೂನ್ (ಪ್ಯಾರಾ ಪವರ್ ಲಿಫ್ಟಿಂಗ್) ಮತ್ತು ಶ್ರೀ ನಿರಂಜನ್ ಮುಕುಂದನ್ (ಪ್ಯಾರಾ ಈಜು) ಇವರುಗಳಿಗೆ ರಾಜ್ಯ ಸರ್ಕಾರದ ವರಿಯಿಂದ ತಲಾ 10.00 ಲಕ್ಷ ರೂಗಳ ನಗದು ಪುರಸ್ಕಾರ ನೀಡಲಾಗಿದೆ.

ಸರ್ಕಾರವು 2020–21ನೇ ಸಾಲಿನಲ್ಲಿ ಇದುವರೆಗೆ ಕ್ರೀಡಾಪಟುಗಳಿಗೆ ರೂ 10.00 ಕೋಟಿಗೂ ಹೆಚ್ಚು ಮೊತ್ತವನ್ನು ವಿತರಿಸಲಾಗಿದ್ದು, ನೇರವಾಗಿ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 16 ರಾಷ್ಟ್ರೀ ಮತ್ತು ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಜಿಮ್ ಸ್ಥಾಪನೆಗಾಗಿ ರೂ 219.00 ಲಕ್ಷ ಒದಗಿಸಲಾಗಿದೆ. ದಕ್ಷಿಣ ಕನ್ನಡ, ಕೊಡಿಗೆ ಮತ್ತು ದಾವಣಗೆರೆ ಕ್ರೀಡಾ ಶಾಲೆ / ನಿಲಯದ ಕ್ರೀಡಾಪಟುಗಳಿಗೆ ಒಟ್ಟು ರೂ. 180.00 ಲಕ್ಷ ವೆಚ್ಚದಲ್ಲಿ ದಿನನಿತ್ಯದ ಅಭ್ಯಾಸಕ್ಕಾಗಿ ಅತ್ಯಾಧುನಿಕ ಜಿಮ್ ಉಪಕರಣಗಳನ್ನು ಒದಗಿಸಲಾಗಿದೆ. ಅಲ್ಲದೆ 24 ಸರ್ಕಾರಿ ಕಾಲೇಜುಗಳಿಗೆ ರೂ. 134.00 ಲಕ್ಷ ವೆಚ್ಚದಲ್ಲಿ ಜಿಮ್ ಸಾಮಗ್ರಿ ಒದಗಿಸಲಾಗಿದೆ.

ಕೋವಿಡ್– 19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ರಾಜ್ಯದ ಯುವ ಜನರು ಸೇರಿದಂತೆ ಎಲ್ಲಾ ನಾಗರೀಕರಿಗೆ ಮಾನಸಿಕ ಆರೋಗ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ನಿಮ್ಹಾನ್ಸ್ ಸಂಸ್ಥೆಯ ಸಹಯೋಗದೊಂದಿಗೆ ಯುವ ಸ್ಪಂದನ ಯೋಜನೆಯ ಅನುಷ್ಠಾನಕ್ಕೆ ರೂ. 250.00 ಲಕ್ಷ ಅನುದಾನ ಒದಗಿಸಲಾಗಿದೆ.

2020–21ನೇ ಸಾಲಿನಲ್ಲಿ ಒಟ್ಟು ರೂ 1600.00 ಲಕ್ಷ ವೆಚ್ಚದಲ್ಲಿ ರಾಜ್ಯದ ವಿವಿಧ ಕ್ರೀಡಾಂಗಣಗಳ ಉನ್ನತೀಕರಣ ಕಾಮಗಾರಿ ಕೈಗೊಳ್ಳಲಾಗಿದೆ.

ಭಾರತದ ಸ್ವಾತಂತ್ರ್ಯದ 75ನೇ ವರ್ಷದ ಆಚರಣೆಯ ಅಂಗವಾಗಿ "ಅಮೃತ ಕ್ರೀಡಾ ದತ್ತು ಯೋಜನೆ" ರೂಪಿಸಲಾಗಿದೆ. ಅದರಲ್ಲಿ 75 ಯುವ ಪ್ರತಿಭಾವಂತ ಕ್ರೀಡಾಪಟುಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಅವರಿಗೆ ಉತ್ತೇಜನ ನೀಡಲು 2024ರ ಪ್ಯಾರಿಸ್ ಒಲಂಪಿಕ್ಸ್‌ನಲ್ಲಿ ಭಾಗವಹಿಸಿ ರಾಷ್ಟ್ರಕ್ಕೆ ಕೀರ್ತಿ ತರಲು ಸಹಾಯವಾಗುವಂತೆ ಅವರ ಕ್ರೀಡಾ ತರಬೇತಿಗಾಗಿ ಅಂದಾಜು ತಲಾ ರೂ 5.00 ಲಕ್ಷ ಅನುದಾನವನ್ನು ಮೀಸಲಿಡಲಾಗುವುದು.

ಭಾರತ ಸರ್ಕಾರವು 09 ವಿವಿಧ ಯೋಜನೆಗಳಿಗೆ ಒಟ್ಟು ರೂ. 45.82 ಕೋಟಿ ಮಂಜೂರು ಮಾಡಿದ್ದು, ಇದುವರೆಗೆ ರೂ. 975.00 ಲಕ್ಷ ಬಿಡುಗಡೆ ಮಾಡಿದೆ. ಹಾಸನ ಜಿಲ್ಲಾ ಕ್ರೀಡಾಂಗಣ, ಚಿಕ್ಕಮಗಳೂರು ಜಿಲ್ಲಾ ಕ್ರೀಡಾಂಗಣಗಳಲ್ಲಿ ತಲಾ ರೂ. 700.00 ಲಕ್ಷ ವೆಚ್ಚದಲ್ಲಿ ಆಧುನಿಕ ಸಿಂಥಟಿಕ್ ಅಥ್ಲೆಟಿಕ್ ಟ್ರ್ಯಾಕ್ ಅಳವಡಿಸಲಾಗುವುದು.

ಮಾರ್ಚ್ 5, 2022ರಿಂದ 10 ದಿನಗಳ ಕಾಲ ಬೆಂಗಳೂರಿನ ಜೈನ್ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ "ಖೇಲೋ ಇಂಡಿಯಾ ಯುನಿವರ್ಸಿಟಿ ಗೇಮ್ಸ್ – 2021" ಆಯೋಜಿಸಲಾಗುತ್ತಿದೆ. ಈ ಕ್ರೀಡಾಕೂಟದ ಉದ್ಘಾಟನೆಗೆ ಸನ್ಮಾನ್ಯ ಪ್ರಧಾನಮಂತ್ರಿಗಳನ್ನು ಆಹ್ವಾನಿಸಲು ಉದ್ದೇಶಿಸಲಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಶ್ರೀ ಕಂಠೀರವ ಕ್ರೀಡಾಂಗಣ, ಹಾಕಿ ಕ್ರೀಡಾಂಗಣ ಹಾಗೂ ಕನಕಪುರ ರಸ್ತೆಯ ಜೈನ್ ವಿಶ್ವವಿದ್ಯಾಲಯದ ಆವರಣಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸಲಾಗುವುದು. ಖೇಲೋ ಇಂಡಿಯಾ ಯುನಿವರ್ಸಿಟಿ ಗೇಮ್ಸ್ ನಲ್ಲಿ ಒಟ್ಟು 20 ವಿವಿಧ ಕ್ರೀಡೆಗಳು ಅಂದರೆ, ಅರ್ಚರಿ, ಬ್ಯಾಡ್ಮಿಂಟನ್, ಬಾಕ್ಸಿಂಗ್, ಪುಟ್ಬಾಲ್, ಜುಡೋ, ಟೇಬಲ್ ಟೆನ್ನಿಸ್, ವಾಲಿಬಾಲ್, ಕುಸ್ತಿ, ಅಥ್ಲೆಟಿಕ್ಸ್, ಬಾಸ್ಕೆಟ್‌ಬಾಲ್, ಫೆನ್ಸಿಂಗ್, ಹಾಕಿ, ಕಬ್ಬಡಿ, ಈಜು, ಟೆನ್ನಿಸ್, ಭಾರ ಎತ್ತುವುದು, ಯೋಗಾಸನ, ಮಲ್ಲಕಂಭ, ಶೂಟಿಂಗ್, ಕರಾಟೆ ಹಾಗೂ ಸೈಕ್ಲಿಂಗ್ ಸ್ಪರ್ಧೆ ಆಯೋಜಿಸಲಾಗಿದೆ.

ಸರ್ಕಾರಿ ವೈಮಾನಿಕ ತರಬೇತಿ ಶಾಲೆಯ ಪುನಶ್ಚೇತನ ಕಾರ್ಯ ಕೈಗೊಂಡಿದ್ದು, ವೈಮಾನಿಕ ತರಬೇತಿಯನ್ನು ಪುನರಾರಂಭಿಸುವ ನಿಟ್ಟಿನಲ್ಲಿ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ. ಪ್ರಮುಖವಾಗಿ ಮುಖ್ಯ ವೈಮಾನಿಕ ಬೋಧಕರ ನೇಮಕ, ರನ್‌ವೇ ನವೀಕರಣ, ರನ್‌ವೇ ಲಂಭೀಕರಣಕ್ಕೆ ಹೆಚ್ಚುವರಿ ನಿವೇಶನ ಭೂಸ್ವಾಧೀನ ಮತ್ತಿತರ ಕಾರ್ಯಗಳನ್ನು ಸರ್ಕಾರವು ಕೈಗೆತ್ತಿಕೊಂಡಿದೆ.

ಯುವ ಸಬಲೀಕರಣ ಕ್ರೀಡಾ ಇಲಾಖೆಯು ಸಾಧಕ ಕ್ರೀಡಾಪಟುಗಳ ವಿವಿಧ ಸಾಧನೆ ಆಧರಿಸಿದಿ ನಗದು ಪುರಸ್ಕಾರಗಳನ್ನು ನೀಡುತ್ತಿದ್ದೆ. ಒಲಂಪಿಕ್ಸ್ / ಪ್ಯಾರಾಲಿಂಪಿಕ್ಸ್ ನಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ವಿಜೇತರಾದಲ್ಲಿ ಚಿನ್ನದ ಪದಕ ವಿಜೇತರಿಗೆ ರೂ 500.00 ಲಕ್ಷ ರಜತ ಪದಕ ವಿಜೇತರಿಗೆ 300.00 ಲಕ್ಷ ರೂ ಕಂಚಿನ ಪದಕ ವಿಜೇತರಿಗೆ 200.00 ಲಕ್ಷ ರೂ ನೀಡಲಾಗುವುದು

ಏಷಿಯನ್ ಗೇಮ್ಸ್ ಹಾಗೂ ಕಾಮನ್ ವೆಲ್ತ್ ಗೇಮ್ಸ್‌ನಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ವಿಜೇತರಾದಲ್ಲಿ ಚಿನ್ನದ ಪದಕ ವಿಜೇತರಿಗೆ ರೂ 25.00 ಲಕ್ಷ ರಜತ ಪದಕ ವಿಜೇತರಿಗೆ 15.00 ಲಕ್ಷ ರೂ ಕಂಚಿನ ಪದಕ ವಿಜೇತರಿಗೆ 8.00 ಲಕ್ಷ ರೂ ನೀಡಲಾಗುವುದು

ವರ್ಲ್ಡ್‌ಕಪ್ / ಚಾಂಪಿಯನ್‌ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿದ) ಹಾಗೂ ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು)ನಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ವಿಜೇತರಾದಲ್ಲಿ ಚಿನ್ನದ ಪದಕ ವಿಜೇತರಿಗೆ ರೂ 5.00 ಲಕ್ಷ ರಜತ ಪದಕ ವಿಜೇತರಿಗೆ 3.00 ಲಕ್ಷ ರೂ ಕಂಚಿನ ಪದಕ ವಿಜೇತರಿಗೆ 2.00 ಲಕ್ಷ ರೂ ನೀಡಲಾಗುವುದು.

## ಉದ್ಯೋಗ ನೀತಿ ಜಾರಿ – ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

ದೇಶದಲ್ಲಿಯೇ ಮೊಟ್ಟ ಮೊದಲ ಬಾರಿಗೆ ಉದ್ಯೋಗ ನೀತಿ ಜಾರಿಗೆ ತರಲಾಗುವುದು. ಈಗಾಗಲೇ ಇದರ ಕರಡು ಪ್ರತಿ ಸಿದ್ದವಾಗಿದೆ ಶೀಘ್ರದಲ್ಲಿಯೇ ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಅವರು ತಿಳಿಸಿದರು.

ಇಂದು ಬೆಂಗಳೂರು ಅರಮನೆಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಹಮಿಕೊಂಡಿದ್ದ "ಉದ್ಯೋಗಿಯಾಗು – ಉದ್ಯೋಗ ನೀಡು" ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದ ಈಗಾಗಲೇ ನಮ್ಮ ಸರ್ಕಾರ ದೇಶಕ್ಕೆ ಮಾದರಿಯಾದ ಕೈಗಾರಿಕಾ ನೀತಿಯನ್ನು ಜಾರಿಗೆ ತಂದಿದೆ. ಕೈಗಾರಿಕೆಗಳಿಗೆ ಹಾಗೂ ಉದ್ಯಮಿಗಳಿಗೆ ನಮ್ಮ ಸರ್ಕಾರ

ನೀಡಿರುವಷ್ಟು ಪ್ರೋತ್ಸಾಹ ಹಾಗೂ ಉತ್ತೇಜನ ಬೇರೆ ಯಾವುದೇ ಸರ್ಕಾರಗಳು ನೀಡಿರುವ ನಿದರ್ಶನಗಳು ಇಲ್ಲ. ದೇಶದಲ್ಲಿಯೇ ಮೊದಲ ಬಾರಿಗೆ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ನಡೆಸಿದ್ದು, ನಮ್ಮ ಸರ್ಕಾರ ಎಂದು ತಿಳಿಸಿದರು.

ಉದ್ಯೋಗ ನೀತಿಯಲ್ಲಿ ಯಾವ ಉದ್ಯಮಿಗಳು ಯಾವ ಕೈಗಾರಿಕೆಗಳು ಹೆಚ್ಚು ಉದ್ಯೋಗ ನೀಡುತ್ತಾರೋ ಅವರಿಗೆ ಸರ್ಕಾರದ ವತಿಯಿಂದ ವಿಶೇಷವಾದ ಪ್ರೋತ್ಸಾಹ ನೀಡಲಾಗುವುದು. ದೇಶದಲ್ಲೇ ಕರ್ನಾಟಕವನ್ನು ಕೈಗಾರಿಕಾ ಸ್ನೇಹಿ ರಾಜ್ಯವನ್ನಾಗಿ ಮಾಡಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಸುಮಾರು 488 ಸ್ಟಾರ್ಟ್ ಅಪ್ ಕೇಂದ್ರಗಳು ಬೆಂಗಳೂರಿನಲ್ಲಿವೆ. ಪರಿಶಿಷ್ಟಜಾತಿ / ಪರಿಶಿಷ್ಟ ಪಂಗಡದ ಸುಮಾರು 75 ಸಾವಿರ ವಿದ್ಯಾರ್ಥಿಗಳಿಗೆ ಕೌಶಲ್ಯ ಅಭಿವೃದ್ಧಿ ತರಬೇತಿಗಳನ್ನು ನೀಡಲಾಗಿದೆ. ಅಲ್ಲದೆ ಹಿಂದುಳಿದ ವರ್ಗದ ಮಹಿಳೆಯರಿಗೂ ನಮ್ಮ ಸರ್ಕಾರ ನೆರವು ನೀಡಿದೆ. ಸ್ಟಾರ್ಟ್‌ಅಪ್ ಪಾಲಿಸಿ ಮತ್ತು ಸೆಮಿ ಕಂಡಕ್ಟರ್ ಪಾಲಿಸಿ ಕೈಗಾರಿಕಾ ನೀತಿಯಲ್ಲಿವೆ. ಟಯರ್ 2 ಮತ್ತು ಟಯರ್ 3 ನಗರಗಳಲ್ಲಿ ಹೆಚ್ಚು ಹೆಚ್ಚು ಕೈಗಾರಿಕೆಗಳು ಸ್ಥಾಪನೆಯಾಗಬೇಕು. ಸರ್ಕಾರವು ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಲು ಸಿದ್ದವಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ವಿದ್ಯಾರ್ಥಿಗಳು, ಪ್ರತಿಭಾವಂತರು ಹಾಗೂ ಯುವಕರು ಕಠಿಣ ಪರಿಶ್ರಮ ಪಟ್ಟರೆ ಮಾತ್ರ ಮುಂದೆ ಬರಲು ಸಾಧ್ಯವಿದ. ಸಮಯ ಪ್ರಜ್ಞೆ, ಸ್ಥಿತಿ ಪ್ರಜ್ಞೆ ಇದ್ದರೆ ಮಾತ್ರ ಜೀವನದಲ್ಲಿ ಏನೂ ಬೇಕಾದರೂ ಸಾಧಿಸಬಹುದು. ಯಾರು ಕಷ್ಟಪಡುತ್ತಾರೋ ಅವರು ಕಂಡಿತಾ ಜೀವನದಲ್ಲಿ ಮುಂದೆ ಬರುತ್ತಾರೆ ಎಂದು ಅಭಿಪ್ರಾಯಪಟ್ಟರು.

ರೈತರ ಜಮೀನುಗಳಿಗೆ ದೊಡ್ಡ ಮಟ್ಟದಲ್ಲಿ ಪರಿಹಾರ ಸಿಕ್ಕಿದೆ ಎಂದರೆ ಇದಕ್ಕೆ ಹಿಂದಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಕಾರಣ ಎಂದು ಮುಕ್ತಕಂಠದಿಂದ ಹೊಗಳಿದರು. ದೇಶದಲ್ಲೇ ಮೊದಲ ಬಾರಿಗೆ ನಮ್ಮ ಸರ್ಕಾರ ಸಂಶೋಧನೆ ಮತ್ತು ಅಭಿವೃದ್ಧಿ ಪಾಲಿಸಿಯನ್ನು ಸಹ ತರುವ ಕೆಲಸವನ್ನು ಮಾಡುತ್ತಿದ್ದೇವೆ. ಕೈಗಾರಿಕಾ ನೀತಿಯಿಂದ ಅತಿ ಹೆಚ್ಚು ಉದ್ಯೋಗ ನೀಡುವ ಕೆಲಸಗಳಾಗಬೇಕಾಗಿದೆ. ರಾಜ್ಯದ ಜನತೆಗೆ ಉದ್ಯೋಗ ನೀಡುವಲ್ಲಿ ಕೈಗಾರಿಕೆಗಳ ಪಾತ್ರ ಬಹಳ ಮಹತ್ವ. ಕೈಗಾರಿಕೆಗಳಿಗೆ ಸರ್ಕಾರದಿಂದ ಏನು ಸಹಾಯಬೇಕೋ ಅದನ್ನು ಕಲ್ಪಿಸಿಕೊಡಲಾಗುವುದು ಎಂದು ತಿಳಿಸಿದರು.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಮುರುಗೇಶ್ ನಿರಾಣಿ ಅವರು ಮಾತನಾಡುತ್ತಾ, ಹಿಂದೆ ನಮ್ಮ ಸರ್ಕಾರದ ಅವಧಿಯಲ್ಲಿ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆಸಲಾಗಿತ್ತು. ಪರಿಣಾಮವಾಗಿ ರಾಜ್ಯಕ್ಕೆ ದೊಡ್ಡ ಪ್ರಮಾಣದ ಬಂಡವಾಳ ಹೂಡಿಕೆ ಹಾಗೂ ಉದ್ಯೋಗಗಳು ಸೃಷ್ಠಿಯಾದವು. ಈ ಕಾರ್ಯಕ್ರಮದ ಮೂಲಕ ಪ್ರತಿಭಾವಂತರು ಉದ್ಯಮಿಯಾಗಿ ಬೇರೊಬ್ಬರಿಗೆ ಉದ್ಯೋಗ ಕೊಡಲು ಮುಂದೆ ಬರಬೇಕು ಎಂದು ಮನವಿ ಮಾಡಿದರು.

ಸಣ್ಣ ಕೈಗಾರಿಕಾ ಸಚಿವ ಎನ್. ನಾಗರಾಜು (ಎಂ.ಟಿ.ಬಿ) ಮಾತನಾಡುತ್ತಾ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯುವಕರು ಸ್ವಾವಲಂಬಿಗಳಾಗಲು ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಸ್ಟಾರ್ಟ್‌ಅಪ್, ಮೆಕ್‌ಇನ್ ಇಂಡಿಯಾ ಸೇರಿದಂತೆ ಮತ್ತಿತರ ಯೋಜನೆಗಳ ಮೂಲಕ ಉದ್ಯೋಗ ಪಡೆದು ದೇಶದ ಅಭಿವೃದ್ಧಿಗೆ ಕೈ ಜೋಡಿಸಬೇಕು. ಉದ್ಯಮ ಅರಂಭಿಸುವವರಿಗೆ ಆರ್ಥಿಕ ನೆರವು, ಸಹಾಯಧನ, ತರಬೇತಿ ಎಲ್ಲಾ ಸಹಕಾರಗಳನ್ನು ನೀಡಲು ನಮ್ಮ ಸಕಾರ ಸಿದ್ದವಿದೆ. ಸರ್ಕಾರದಲ್ಲಿ ಅನೇಕ ಯೋಜನೆಗಳಿವೆ. ಪ್ರತಿಭಾವಂತರು ಅದರ ಲಾಭ ಪಡೆಯಲು ಮುಂದೆ ಬಂದರೆ ತರಬೇತಿ ನೀಡಲಾಗುವುದು. ಕೇವಲ ಉದ್ಯೋಗ ಪಡೆಯುವುದು ಮಾತ್ರವಲ್ಲ, ಉದ್ಯಮಿಯಾಗಲು ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಸಮಾರಂಭದಲ್ಲಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ, ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಸೇರಿದಂತೆ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳು ಗಣ್ಯರು ಉಪಸ್ಥಿತರಿದ್ದರು.

## ಸಚಿವರಿಂದ ನೇಮಕಾತಿ ಆದೇಶ ವಿತರಣೆ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಿರಿಯ ಪವರ್ ಮ್ಯಾನ್ ಹುದ್ದೆಗಳಿಗೆ ಬ್ಯಾಕ್‌ಲಾಗ್ ಮೂಲಕ ನೇಮಕಗೊಂಡಿರುವ 21 ಅರ್ಹ ಅಭ್ಯರ್ಥಿಗಳಿಗೆ ಇಂಧನ ಸಚಿವ ವಿ.ಸುನೀಲ್‌ಕುಮಾರ್ ಕೆಪಿಟಿಸಿಎಲ್ ಕಛೇರಿಯಲ್ಲಿ ನೇಮಕಾತಿ ಆದೇಶ ನೀಡಿದರು. ಈ ಕಂಪನಿಗಳಲ್ಲಿ ನೇಮಕಾತಿ ಪ್ರಕ್ರಿಯೆ ನಡೆದಿರುವ 1897 ಕಿರಿಯ ಪವರ್ ಮ್ಯಾನ್ ಮತ್ತು ಸ್ಟೇಷನ್ ಪರಿಚಾರಕ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸದ್ಯದಲ್ಲಿಯೇ ಪ್ರಕಟಿಸಲಾಗುವುದು ಎಂದು ಸಹ ತಿಳಿಸಿದರು.

ಈ ಸಂದರ್ಭದಲ್ಲಿ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಜಿ. ಕುಮಾರ್ ನಾಯಕ್, ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕಿ ಡಾ.ಎನ್.ಮಂಜುಳಾ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

**ಛಾಯಾಚಿತ್ರ ಶೀರ್ಷಿಕೆ:**

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಆಯೋಜಿಸಿರುವ ಉದ್ಯಮಿಯಾಗು- ಉದ್ಯೋಗ ನೀಡು ಕಾರ್ಯಕ್ರಮವನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಇಂದು ಉದ್ಘಾಟಿಸಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಸಚಿವರಾದ ಮುರುಗೇಶ್ ನಿರಾಣಿ, ಡಾ: ಸಿ.ಎನ್.ಅಶ್ವತ್ಥ್ ನಾರಾಯಣ್, ಎಂ.ಟಿ.ಬಿ.ನಾಗರಾಜ್, ಎಸ್.ಟಿ.ಸೋಮಶೇಖರ್ ಉಪಸ್ಥಿತರಿದ್ದರು.

## ಕ್ರೀಡೆಯಲ್ಲಿ ದಿವ್ಯಾಂಗರು ಭಾಗವಹಿಸುವಿಕೆಗೆ ಪ್ರೋತ್ಸಾಹ ನೀಡಲು ರಾಜ್ಯಪಾಲರ ಕರೆ

ಬೆಂಗಳೂರು, ಅಕ್ಟೋಬರ್ 11, (ಕರ್ನಾಟಕ ವಾರ್ತೆ):

ಭಾರತವನ್ನು ಪ್ರತಿನಿಧಿಸುವ ಪ್ರತಿಯೊಬ್ಬ ಕ್ರೀಡಾಪಟುವೂ ಚಾಂಪಿಯನ್. ದಿವ್ಯಾಂಗರು ಸೇರಿದಂತೆ ಇಂದಿನ ಯುವ ಪೀಳಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮಾಡುವುದು, ರಾಜ್ಯ, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವಂತೆ ತರಬೇತಿ ನೀಡುವುದು, ನಾಯಕತ್ವದ ಗುಣಗಳನ್ನು ಬೆಳಸಿಕೊಳ್ಳಲು ಪ್ರೇರೇಪಿಸುವಂತೆ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಇಂದು ರಾಜಭವನದ ಬಾಂಕ್ವೆಟ್ ಸಭಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಟೋಕಿಯೋ ಒಲಿಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್ ನಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಹಾಗೂ ತರಬೇತುದಾರರಿಗೆ ಸನ್ಮಾನ ಸಮಾರಂಭದಲ್ಲಿ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ಪ್ರದಾನ ಮಾಡಿ ಅವರು ಮಾತನಾಡಿದರು.

ಕ್ರೀಡಾಪಟುಗಳು ಒಲಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್ ನಲ್ಲಿ ಭಾಗವಹಿಸಿ, ಪದಕಗಳನ್ನು ಗೆಲ್ಲುವ ಮೂಲಕ ವಿಶ್ವದಲ್ಲೇ ಕರ್ನಾಟಕ ರಾಜ್ಯ ಮತ್ತು ದೇಶ ಹೆಮ್ಮೆ ಪಡುವಂತೆ ಮಾಡಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಕ್ರೀಡೆ ಭವಿಷ್ಯ ಉಜ್ವಲವಾಗಲಿದೆ. ಕರ್ನಾಟಕ ಸರ್ಕಾರವು ವಿವಿಧ ಯೋಜನೆಗಳ ಮೂಲಕ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸುತ್ತಿದೆ. ವಿವಿಧ ಹಂತಗಳಲ್ಲಿ ಸಾಧನೆ ಮಾಡಿದ ಆಟಗಾರರಿಗೆ ಬಹುಮಾನ ನೀಡುವುದರೊಂದಿಗೆ, ಆಧುನಿಕ ಕ್ರೀಡಾ ಸೌಲಭ್ಯಗಳನ್ನು ಸಹ ಆಟಗಾರರಿಗೆ ಒದಗಿಸಲಾಗುತ್ತಿದೆ. ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಅತ್ಯಾಧುನಿಕ ಕ್ರೀಡಾ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲಾಗಿದೆ. ಈ ಯೋಜನೆಗಳನ್ನು ಕ್ರೀಡಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕು ಹಾಗೂ ವಿಶೇಷವಾಗಿ ದಿವ್ಯಾಂಗರ ಸಾಮರ್ಥ್ಯ, ಚೈತನ್ಯವನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಪ್ಯಾರಾಲಿಂಪಿಕ್ ಕ್ರೀಡಾಕೂಟವನ್ನು 1960 ರಲ್ಲಿ ಆರಂಭಿಸಲಾಯಿತು, 1968 ರಲ್ಲಿ ಭಾರತವು ಮೊದಲ ಬಾರಿಗೆ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸಿತು. 1972ರಲ್ಲಿ ನಡೆದ ಪ್ಯಾರಾಲಿಂಪಿಕ್ಸ್‌ನಲ್ಲಿ 50 ಮೀಟರ್ ಫ್ರೀಸ್ಟೈಲ್ ಸ್ವಿಮ್ಮಿಂಗ್‌ನಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ವಿಶ್ವದಾಖಲೆ ನಿರ್ಮಿಸಿದ್ದರು. ಜೋಗಿಂದರ್ ಸಿಂಗ್ ಬೇಡಿ 1984ರ ಪ್ಯಾರಾಲಿಂಪಿಕ್ಸ್‌ನಲ್ಲಿ ಒಂದು ಬೆಳ್ಳಿ ಮತ್ತು 2 ಕಂಚಿನ ಪದಕ ಒಟ್ಟು ಮೂರು ಪದಕ ಪಡೆಯುವ ಮೂಲಕ ಅತಿ ಹೆಚ್ಚು ಪದಕ ಗೆದ್ದಿರುವ ಭಾರತೀಯ ಪ್ಯಾರಾ ಕ್ರೀಡಾಪಟು ಎಂಬ ದಾಖಲೆಗೆ ಪಾತ್ರರಾಗಿದ್ದಾರೆ. ಭಾರತವು 1984 ರ ಪ್ಯಾರಾಲಿಂಪಿಕ್ಸ್ ನಂತರ ನಿರಂತರವಾಗಿ ಈ ಆಟಗಳಲ್ಲಿ ಭಾಗವಹಿಸುತ್ತಿದೆ ಎಂದು ತಿಳಿಸಿದರು.

ಟೋಕಿಯೊ ಒಲಿಂಪಿಕ್ -2020 ಕ್ರೀಡಾಕೂಟದಲ್ಲಿ ಭಾರತವು 7 ಪದಕಗಳನ್ನು ಗೆದ್ದಿದೆ. ಟೋಕಿಯೊ ಪ್ಯಾರಾಲಿಂಪಿಕ್ಸ್‌ಗೆ ಮುನ್ನ ಭಾರತವು ಒಟ್ಟು 12 ಪದಕಗಳನ್ನು ಗೆದ್ದಿತ್ತು. ಕ್ರೀಡಾಲೋಕದಲ್ಲಿ ಅತ್ಯುತ್ತಮ ಪ್ರದರ್ಶನ ನೀಡುತ್ತಿರುವ ಭಾರತೀಯ ಪ್ಯಾರಾ ಅಥ್ಲೀಟ್ ಗಳು ಈ ಬಾರಿ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ 19 ಪದಕಗಳನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ. ಈ ಅಂತಾರಾಷ್ಟ್ರೀಯ ಸ್ಪರ್ಧೆಯಲ್ಲಿ ಭಾರತೀಯ ಆಟಗಾರರು ಏನೆಲ್ಲಾ ಪದಕಗಳನ್ನು ಗೆದ್ದಿದ್ದಾರೆ ಮತ್ತು ಅದ್ಭುತ ಪ್ರದರ್ಶನ ನೀಡುವ ಮೂಲಕ ಹೊಸ ದಾಖಲೆಗಳನ್ನು ಸೃಷ್ಟಿಸಿರುವುದಕ್ಕೆ ದೇಶ ಹೆಮ್ಮೆ ಪಡುತ್ತದೆ. ನೀವು ಸಾಧಿಸಿದ ಸಾಧನೆ ಯುವ ಆಟಗಾರರಿಗೆ ಅದ್ಭುತ ಮತ್ತು ಸ್ಫೂರ್ತಿದಾಯಕವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಸನ್ಮಾನ್ಯ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ, ಕ್ರೀಡಾ ಸಚಿವರಾದ ಡಾ.ಕೆ.ಸಿ ನಾರಾಯಣ ಗೌಡ, ಎಂಎಲ್ ಸಿ ಡಾ.ಕೆ ಗೋವಿಂದರಾಜ್, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಮಾನ್ಯ ಉಪಾಧ್ಯಕ್ಷರಾದ ಶ್ರೀ ಕೆ.ಪಿ ಪುರುಷೋತ್ತಮ, ಯುವ ಸಬಲೀಕರಣ ಮತ್ತು ಕ್ರೀಡೆ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಉಪಸ್ಥಿತರಿದ್ದರು.

## ರಾಜ್ಯ ರಾಷ್ಟ್ರೀಯ ಸೇವಾ ಯೋಜನೆಯ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಜ್ಯ ರಾಷ್ಟ್ರೀಯ ಸೇವಾ ಯೋಜನೆಯ 2017–18, 2018–19 ಮತ್ತು 2019–20ನೇ ಸಾಲಿನ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭವು ಅಕ್ಟೋಬರ್ 12, 2021ರಂದು ಬೆಳಿಗ್ಗೆ 11.00 ಗಂಟೆಗೆ ಬೆಂಗಳೂರಿನ ಯವನಿಕ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಚಿವರಾದ ಡಾ.ಕೆ.ಸಿ.ನಾರಾಯಣಗೌಡರವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಸದಸ್ಯರಾದ ರಿಜ್ವಾನ್ ಅರ್ಷದ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

2017–18ನೇ ಸಾಲಿನಲ್ಲಿ 2 ವಿಶ್ವವಿದ್ಯಾಲಯಗಳು – ರಾಣಿಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ, ಕೆಎಲ್‌ಇ ವಿಶ್ವವಿದ್ಯಾಲಯ, ಬೆಳಗಾವಿ, 2018–19ನೇ ಸಾಲಿನಲ್ಲಿ ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಮತ್ತು 2019–20ನೇ ಸಾಲಿನಲ್ಲಿ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಮತ್ತು ಯೆನೆಪೊಯ ವಿಶ್ವವಿದ್ಯಾಲಯ, ಮಂಗಳೂರು ಅತ್ಯುತ್ತಮ ವಿಶ್ವವಿದ್ಯಾನಿಲಯ ಪ್ರಶಸ್ತಿ ಪಡೆದ ವಿಶ್ವವಿದ್ಯಾಲಯಗಳಾಗಿವೆ.

ಮೂರು ವರ್ಷದ ಒಟ್ಟು 36 ಕಾಲೇಜುಗಳು ಅತ್ಯುತ್ತಮ ಘಟಕ, 36 ಅತ್ಯುತ್ತಮ ಕಾರ್ಯಕ್ರಮಾಧಿಕಾರಿ ಪ್ರಶಸ್ತಿ ಪಡೆದರೆ 36 ಉತ್ತಮ ಸ್ವಯಂಸೇವಕ / ಸ್ವಯಂ ಸೇವಕಿಯರು ಪ್ರಶಸ್ತಿ ಪಡೆದಿದ್ದಾರೆ.

ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ 2019-20ನೇ ಸಾಲಿನಲ್ಲಿ ಒಟ್ಟು 4 ರಾಷ್ಟ್ರ ಪ್ರಶಸ್ತಿಗಳು ನೀಡಿದ್ದು, 1. ಅತ್ಯುತ್ತಮ ವಿಶ್ವವಿದ್ಯಾನಿಲಯ ಪ್ರಶಸ್ತಿಯನ್ನು ರಾಜ್ಯದ ರಾಜೀವ ಗಾಂಧಿ ಆರೋಗ್ಯ ಮತ್ತು ವಿಜ್ಞಾನಗಳ ವಿಶ್ವವಿದ್ಯಾನಿಲಯ ಬೆಂಗಳೂರು ಇವರಿಗೆ 2. ಅತ್ಯುತ್ತಮ ಘಟಕ / ಕಾರ್ಯಕ್ರಮಾಧಿಕಾರಿಯ ಪ್ರಶಸ್ತಿಯನ್ನು ಸುರೇಶಪ್ಪ. ಕೆ.ಸಜ್ಜನ್, ಜೆಎಸ್ಎಸ್ ಬನಶಂಕರಿ ಆರ್ಟ್ಸ್, ಕಾಮರ್ಸ್ ಅಂಡ್ ಶಾಂತಿಕುಮಾರಿ ಗುಬ್ಬಿ ಸೈನ್ಸ್ ಕಾಲೇಜ್, ವಿದ್ಯಾಗಿರಿ, ಧಾರವಾಡ-580001 ರವರಿಗೆ ಮತ್ತು 3. ಅತ್ಯುತ್ತಮ ಸ್ವಯಂ ಸೇವಕ / ಸೇವಕಿಯರ ಪ್ರಶಸ್ತಿಯನ್ನು ಕು.ಬಿಂದ್ಯಾ ಶೆಟ್ಟಿ, ಗೋವಿಂದ ದಾಸ ಕಾಲೇಜು, ಸೂರತ್ಕಲ್, ಮಂಗಳೂರು-575014 ಹಾಗೂ 4. ಸಿರೀಶ್ ಗೋವರ್ಧನ್, ಕೆ.ಎಸ್.ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ರಘುವನಹಳ್ಳಿ, ಕನಕಪುರ ಮೈನ್ ರೋಡ್, ಬೆಂಗಳೂರು ಇವರುಗಳಿಗೆ ಬಂದಿರುತ್ತದೆ. ಇದು ಒಂದು ಹೆಮ್ಮೆಯ ವಿಷಯವಾಗಿದೆ.

ರಾಷ್ಟ್ರೀಯ ಸೇವಾ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಸರಳೀಕರಿಸಿದ ಕಾರ್ಯಕ್ರಮಗಳನ್ನು ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳಲ್ಲಿ ಪ್ರೌಢಶಾಲೆಗಳಲ್ಲಿ ರಾಜ್ಯ ಸರ್ಕಾರದ ಅನುದಾನದಲ್ಲಿ ಅನುಷ್ಠಾನಗೊಳಿಸಲಾಗಿದೆ. ಶಾಲೆಗಳಲ್ಲಿ ವಿದ್ಯಾರ್ಥಿಗಳು ಸಹ ಉತ್ಸಾಹದಿಂದ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇದು ಸಮಾಜದ, ವ್ಯಕ್ತಿ, ವಿಕಸನ, ಮುಂದಾಳತ್ವದ ಬಗ್ಗೆ ಮತ್ತು ಸುತ್ತ-ಮುತ್ತಲಿನ ಪರಿಸರದ ಬಗ್ಗೆ ಜ್ಞಾನವನ್ನು ಚಿಕ್ಕವಯಸ್ಸಿನಲ್ಲಿಯೇ ಅರಿಯಲು ಸಹಕಾರಿಯಾಗಿದೆ.

ಎನ್ಎಸ್ಎಸ್‌ನಲ್ಲಿ ಸ್ವಯಂಸೇವಕರ ಸಂಖ್ಯೆಯನ್ನು 5 ಲಕ್ಷದಿಂದ 10ಲಕ್ಷಕ್ಕೇರಿಸುವ ಗುರಿಯನ್ನು ಇರಿಸಿದ್ದೇವೆ. ಈಗಾಗಲೇ ಸ್ವಯಂ ಸೇವಕರ ಸಮಖ್ಯೆ 5 ಲಕ್ಷ ದಾಟಿದೆ. ಮುಂದಿನ ವರ್ಷದಲ್ಲಿ 10 ಲಕ್ಷ ತಲುಪುವ ಸಾಧ್ಯತೆ ಇದೆ. ಎನ್ಎಸ್ಎಸ್ ಸ್ವಯಂಸೇವಕರಾಗಿ ನೋಂದಣಿಯಾಗ ಬಯಸುವವರು ಎನ್ಎಸ್ಎಸ್‌ನ ವೆಬ್‌ಸೈಟ್ https://nsskarnataka.net, https://nsskarnataka.com ನಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ. ಅಲ್ಲಿಯೇ ನೇರವಾಗಿ ಸ್ವಯಂ ಸೇವಕರಾಗ ಬಯಸುವವರಿಗೆ ನೋಂದಣಿ ಅವಕಾಶವೂ ಇರುತ್ತದೆ.

ರಾಜ್ಯದ ಯುವ ಜನತೆಗಾಗಿ ಯುವ ಸಹಾಯವಾಣಿ ಹಾಗೂ ಯುವ ಸ್ಪಂದನ ಸಹಾಯ ಕೇಂದ್ರದ ಉದ್ಘಾಟನೆಯು ನಡೆಯುತ್ತಲಿದ್ದು, ಈ ಸಹಾಯವಾಣಿಯ ಮೂಲಕ ಯುವ ಜನರು ಅಗತ್ಯ ಮಾಹಿತಿಯನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ 155265 ನಂಬರ್‌ಗೆ ಕರೆ ಮಾಡಬಹುದು. ಭಾನುವಾರವನ್ನು ಹೊರತುಪಡಿಸಿ ಉಳಿದೆಲ್ಲಾ ದಿನಗಳು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ರವರೆಗೆ ಕರೆ ಮಾಡಬಹುದು.

ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ "ಯವ ಸ್ಪಂದನ" ಎಂಬ ಕಾರ್ಯಕ್ರಮವನ್ನು ಜನ ಆರೋಗ್ಯ ಕೇಂದ್ರ, ಎಪಿಡೇಮಿಥಿಯಾಲಜಿ ವಿಬಾಗ ನಿಮ್ಹಾನ್ಸ್, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಿದೆ. ಇಂತಹ ಸಮುದಾಯ ಆರೋಗ್ಯ ಸಂವರ್ಧನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಪರಿಣಿತಿ ಹೊಂದಿರುವ ನಿಮ್ಹಾನ್ಸ್ ಸಂಸ್ಥೆಯು ಕನಾಟಕದ ಯುವ ಜನರಿಗೆ "ಯುವ ಸ್ಪಂದನ" ಎಂಬ ವಿನೂತನ ಕಾರ್ಯಕ್ರಮ ತರುವಲ್ಲಿ ಎನ್ಎಸ್ಎಸ್‌ನ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾರತದಲ್ಲಿ ಮೊದಲ ಬಾರಿಗೆ ಇಂತಹ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ. ವಿಶ್ವ ಆರೋಗ್ಯ ಸಂಸ್ಥೆ ಅನುಮೋದಿಸಿರುವ 10 ಜೀವನ ಕೌಶಲ್ಯಗಳ ವಿಚಾರವಾಗಿ ತರಬೇತಿ ಕಾರ್ಯಾಗಾರಗಳನ್ನು ನಡೆಸಲು ಯೋಜನೆಗಳನ್ನು ರೂಪಿಸಿ ಎನ್ಎಸ್ಎಸ್ ಸಂಯೋಜಕರು ಹಾಗೂ ಅಧಿಕಾರಿಗಳಿಗೆ 6 ದಿನಗಳ ಸಮಗ್ರ ತರಬೇತಿಯನ್ನು ನೀಡುತ್ತಿದೆ. ಇಂತಹ 100 ತರಬೇತಿ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿದ್ದು, ಇದುವರೆವಿಗೂ 2876 ಎನ್ಎಸ್ಎಸ್ ಕಾರ್ಯಕ್ರಮಾಧಿಕಾರಿಗಳಿಗೆ

ತರಬೇತಿಯನ್ನು ನೀಡಲಾಗಿದೆ. ಅವರುಗಳ ಮೂಲಕ 5,14,233 ಯುವಜನತೆಗೆ ತಲುಪಿಸಲಾಗಿದೆ.

ಮಹಾತ್ಮ ಗಾಂಧಿ ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಕನಸಾಗಿರುವ ಯುವಸಬಲೀಕರಣ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮುನ್ನಡೆಯುತ್ತಿದೆ. ಇದೇ ಆರ್ಥಿಕ ವರ್ಷದಲ್ಲಿ ಎನ್‌ಎಸ್‌ಎಸ್ ಸಹಯೋಗದಲ್ಲಿ ಯುವ ಜನರ ಸಂಗಟನೆಯನ್ನು ಯುವ ಜನರ ರಾಜ್ಯ ಒಕ್ಕೂಟ ವ್ಯವಸ್ಥೆಯನ್ನು ಪಂಚಾಯತ್ ಮಟ್ಟದಿಂದಲು ಸ್ಥಾಪಿಸುವ ಮಹತ್ತರ ಗುರಿಯಿದ್ದು, ಇದು ದೇಶದಲ್ಲಿಯೇ ಮೊಟ್ಟ ಮೊದಲ ಪ್ರಯತ್ನವಾಗಿದೆ.

ಕರ್ನಾಟಕ ರಾಷ್ಟ್ರೀಯ ಸೇವಾ ಯೋಜನೆಗೆ ದೇಶದಲ್ಲೇ ಅತ್ಯಂತ ಮಹತ್ವವಾದ ಸ್ಥಾನವಿದೆ. ಇತರ ರಾಜ್ಯಗಳಿಗೆ ಹೋಲಿಸಿದರೆ ವಿಶೇಷ ಚಟುವಟಿಕೆಗಳಿಗೆ ರಾಜ್ಯ ಸರ್ಕಾರ ಅನುದಾನ ನೀಡುತ್ತಿರುವುದು ಅತ್ಯಂತ ಮಹತ್ವದ್ದಾಗಿದೆ. ಇದರಿಂದ ರಾಷ್ಟ್ರೀಯ ಭಾವೈಕ್ಯತಾ ಶಿಬಿರಗಳನ್ನು, ಯುವಜನೋತ್ಸವ, ಜೀವನಕೌಶಲ್ಯ ತರಬೇತಿ ಕಾರ್ಯಾಗಾರಗಳು, ಸಾಹಸ ಶಿಬಿರ, ಮಹಾತ್ಮಗಾಂಧಿ ಜಯಂತಿ, ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ, ಸ್ವಾಮಿ ವಿವೇಕಾನಂದ ಜಯಂತಿ ಮತ್ತು ಇನ್ನೂ ಅನೇಕ ಕಾರ್ಯಕ್ರಮಗಳನ್ನು ವಿಶಿಷ್ಟ ಕಾರ್ಯಕ್ರಮಗಳಾಗಿ ಹಮ್ಮಿಕೊಳ್ಳಾಗುತ್ತಿದೆ. ಇದು ಎಲ್ಲಾ ರಾಜ್ಯಗಳಲ್ಲಿ ಪ್ರಶಂಸೆಯಾಗಿದೆ.

ಎನ್‌ಎಸ್‌ಎಸ್‌ಗೆ ವಿಶೇಷ ಧನಸಹಾಯವನ್ನು ನೀಡಲಾಗಿದ್ದು, ಇದರ ಬಳಕೆಯನ್ನು ಮಾಡುವ ಬಗ್ಗೆ ಎನ್‌ಎಸ್‌ಎಸ್ ಹಲವು ಕಾರ್ಯಕ್ರಮಗಳನ್ನು ಯೋಜಿಸಿಕೊಂಡಿದೆ. ಕೋವಿಡ್ ಸಂದರ್ಭದಲ್ಲಿ ಜನಜಾಗೃತಿಗೆ ಸಾಕಷ್ಟು ಮಹತ್ವವನ್ನು ನೀಡಲಾಘಿದೆ. ಕೋವಿಡ್‌ನ ಬಗ್ಗೆ ಒಂದೊಂದು ಕರ್ನಾಟಕ ರಾಜ್ಯದಿಂದ ಆರಂಭಿಸಿರುವ ಮೊದಲ ಬಾರಿಯ ಪೈಲಟ್ ಕಾರ್ಯಕ್ರಮವಾಗಿದ್ದು, ದೇಶದಲ್ಲಿಯೇ ನಮ್ಮ ರಾಜ್ಯ ಮಾದರಿಯಾಗುವಂತೆ ಅರಿವು ಕಾರ್ಯಕ್ರಮಗಳನ್ನು ಪ್ರತಿ ಜಿಲ್ಲೆಗೂ ತಲುಪಿಸುತ್ತಿದೆ. ಕೋವಿಡ್ ಸಂದರ್ಭದಲ್ಲಿ ಸಹಾಯವಾಣಿಯ ಮೂಲಕವೂ ಕೂಡ ಸಮಾಲೋಚನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿದೆ. ಅಲ್ಲದೇ ರಾಜ್ಯಾದ್ಯಂತ ಸಾಮಾನ್ಯ ಜನರುಗಳಿಗೆ ವ್ಯಾಕ್ಸಿನೇಷನ್ ಹಾಕಿಸಿಕೊಳ್ಳುವುದರ ಬಗ್ಗೆ ಅರಿವು ಮೂಡಿಸಿ ಹಾಗೂ ಅದರ ಉಪಯುಕ್ತತೆಯ ಬಗ್ಗೆ ಮಾಹಿತಿ ನೀಡಲಾಗಿದೆ. ಜಗತ್ತಿನಾದ್ಯಂತ ಕೋವಿಡ್ ಪಿಡುಗು ಬಾಧಿಸುತ್ತಿರುವ ಕಾರಣ ಆರೋಗ್ಯದ ಕಾರ್ಯಕ್ರಮಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ.

ಪರಿಸರ ರಕ್ಷಣೆ, ಸ್ವಚ್ಚ ಭಾರತದ ಜಾಗೃತಿಗಾಗಿ ಸೈಕಲ್ ಜಾಥಾಗಳನ್ನು ಕೂಡ ನಡೆಸಲಾಗಿದೆ. ಇದರ ಫಲಶ್ರುತಿಯಾಗಿ ಸ್ವಚ್ಚ ಭಾರತದ ಕಾರ್ಯಕ್ರಮದ ಅಡಿಯಲ್ಲಿ ಇದುವರೆಗೆ 1 ಲಕ್ಷ ಟನ್ ತ್ಯಾಜ್ಯವನ್ನು ಸಂಗ್ರಹಿಸಲಾಗಿದೆ. ಅಕ್ಟೋಬರ್ 1 ರಿಂದ 31ರವರೆಗೆ 75 ಲಕ್ಷ ಟನ್‌ಗಳ ತ್ಯಾಜ್ಯವನ್ನು ಸಂಗ್ರಹಿಸಿ, ಸೂಕ್ತ ರೀತಿಯಲ್ಲಿ ತ್ಯಾಜ್ಯ ನಿರ್ವಹಣೆ ಮಾಡುವ ಮೂಲಕ ಸ್ವಚ್ಚ ಭಾರತದ ಯೋಜನೆಗೆ ನಮ್ಮ ನಾಡಿನಿಂದ ಇನ್ನಷ್ಟು ಬೆಂಬಲವನ್ನು ಸೂಚಿಸುವ ಕಾರ್ಯದೆಡೆಗೆ ಗಮನ ಹರಿಸಲಾಗುವುದು.

ಎಸ್‌ಡಿಜಿ ಕಂಪ್ಲಯನ್ಸ್: ಸುಸ್ಥಿರ ಅಭಿವೃದ್ಧಿ ಗುರಿ ಯೋಜನೆಯು 2015 ರಲ್ಲಿ ಯುನೈಟೆಡ್ ನೇಷನ್ಸ್‌ನ ನೇತೃತ್ವದಲ್ಲಿ 193 ರಾಷ್ಟ್ರಗಳ ಸದಸ್ಯರೊಂದಿಗೆ ರೂಪಿತವಾಗಿದ್ದು, ಇದರಲ್ಲಿ ಭಾರತ ದೇಶವು ಸೇರಿದೆ. ಬಡತನ ನಿರ್ಮೂಲನೆ, ಅಸಮಾನತೆಯನ್ನು ಹೋಗಲಾಡಿಸುವುದು. ಎಲ್ಲರಿಗೂ ಸಮಾನ ವಿದ್ಯಾಭ್ಯಾಸ, ಪರಿಸರ ಸಂರಕ್ಷಣೆ, ಅರಣ್ಯೀಕರಣ ಹೀಗೆ ಒಟ್ಟು ಸಮಾಜಮುಖಿ 17 ಗುರಿಗಳನ್ನು ಈ ಯೋಜನೆಯು ಹೊಂದಿದೆ. ಭಾರತ ಸರ್ಕಾರದ ಈ ಯೋಜನೆಯ ಜವಾಬ್ದಾರಿಯನ್ನು ಕರ್ನಾಟಕ ರಾಜ್ಯದಲ್ಲಿ ಯೋಜನಾ ಇಲಾಖೆಯು ತೆಗೆದುಕೊಂಡಿದೆ. ಇದಕ್ಕಾಗಿ ಎಸ್‌ಡಿಜಿ ಸಮನ್ವಯ ಕೇಂದ್ರವನ್ನು ಭಾರತ ಸರ್ಕಾರವು ಸ್ಥಾಪಿಸಿದ್ದು, ಇದರ ಜೊತೆ ಕರ್ನಾಟಕ ಸರ್ಕಾರವು ನಿಕಟವಾಗಿ ಕಾರ್ಯ ನಿರ್ವಸುತ್ತಿದೆ. ಎನ್‌ಎಸ್‌ಎಸ್ ಸಂಯೋಜಕರನ್ನು ಒಳಗೊಂಡಂತೆ

ಕರ್ನಾಟಕ ಸರ್ಕಾರದ ಯೋಜನಾ ಕೇಂದ್ರದ ಜೊತೆ ಕೈಜೋಡಿಸಿ ಈ ಎಸ್‌ಡಿಜಿ ಕಂಪ್ಲಯನ್ಸ್‌ನ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ.

ಸರ್ಕಾರದ ಅಮೃತ ಸಮುದಾಯದ ಕಾರ್ಯಕ್ರಮದ ಅನುಷ್ಠಾನದ ಅಂಗವಾಗಿ ಸುಮಾರು 750 ಹಳ್ಳಿಗಳಿಗೆ ಭೇಟಿ ನೀಡಿ ಸರ್ವೆ ಮಾಡಿಸಲು ಎನ್‌ಎಸ್‌ಎಸ್ ಸಂಯೋಜಕರು ಹಾಗೂ ಅಧಿಕಾರಿಗಳಿಗೆ ತರಬೇತಿಯನ್ನು ನೀಡಲಾಗಿದೆ. ಮುಂದುವರೆದು ಸ್ವಯಂಸೇವಕರಿಗೆ ಎರಡನೇ ಹಂತದ ತರಬೇತಿಯನ್ನು ನೀಡಿ ಸರ್ಕಾರದ ಈ ಯೋಜನೆಯ ಬಗ್ಗೆ ತಿಳಿಹೇಳಿ ಅವರುಗಳಿಂದ ಸಂಕಷ್ಟದಲ್ಲಿರುವ ಕುಟುಂಬಗಳನ್ನು ಗುರುತಿಸಿ ಅವರುಗಳ ಕುಂದುಕೊರತೆಗಳ ಬಗ್ಗೆ ಮಾಹಿತಿಯನ್ನು ಪಡೆದು ಸಂಬಂಧಿಸಿದ ಇಲಾಖೆಗಳಿಗೆ ತಲುಪಿಸಿ ಈ ಕುಟುಂಬಗಳಿಗೆ ಸರ್ಕಾರದ ವತಿಯಿಂದ ಅನಗತ್ಯ ನೆರವು ದೊರಕುವಂತೆ ಕಾರ್ಯಕ್ರಮ ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಸಹಕಾರವನ್ನು ಪಡೆದುಕೊಳ್ಳಲಾಗುತ್ತಿದೆ. ಈ ಕಾರ್ಯಕ್ರಮಗಳಲ್ಲಿ ನಮ್ಮ ಜೊತೆ ಹಲವು ಕಾರ್ಪೋರೇಟ್ ಸಂಸ್ಥೆಗಳು ಕೂಡ ಕೈಜೋಡಿಸಿರುವುದು ಹೆಮ್ಮೆಯ ವಿಚಾರವಾಗಿದೆ.

ಅರಣ್ಯೀಕರಣ ವಿಚಾರವಾಗಿ ರಾಜ್ಯಾದ್ಯಂತ ಸಾಕಷ್ಟು ಕಾರ್ಯಕ್ರಮಗಳನ್ನು ಶಾಲಾ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳ ವತಿಯಿಂದಲೂ ಕೂಡ ಹಮ್ಮಿಕೊಳ್ಳಲಾಗಿದ್ದು, ಇದುವರೆಗೆ 2 ಲಕ್ಷ ಸಸಿಗಳನ್ನು ನೆಡುವ ಕಾರ್ಯಕ್ರಮವು ಯಶಸ್ವಿಯಾಗಿ ಪೂರೈಸಲಾಗಿದೆ ಎಂದು ತಿಳಿಸಿದರು.

## ವಿಶ್ವವಿಕಲಚೇತನರ ದಿನಾಚರಣೆ ಅಂಗವಾಗಿ ರಾಜ್ಯ ಪ್ರಶಸ್ತಿ ಪ್ರದಾನ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಶ್ವಸಂಸ್ಥೆಯ ನಿರ್ದೇಶನಾನುಸಾರ ಪ್ರತಿ ವರ್ಷ ಡಿಸೆಂಬರ್ 3 ರಂದು "ವಿಶ್ವವಿಕಲಚೇತನರ ದಿನಾಚರಣೆ"ಯನ್ನು ಆಚರಿಸಲಾಗುತ್ತಿದ್ದು, ಸರ್ಕಾರದ ವತಿಯಿಂದ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ 15 ವ್ಯಕ್ತಿಗಳು, ವಿಕಲಚೇತನರ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ 08 ಸಂಸ್ಥೆಗಳು, ವಿಶಿಷ್ಟ ಸಾಧನೆಗೈದಿರುವ 02 ಸಂಸ್ಥೆಗಳು ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟು, ಸೇವೆ ಸಲ್ಲಿಸುತ್ತಿರುವ/ಸಲ್ಲಿಸಿರುವ 05 ವಿಶೇಷ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ.

ಆಸಕ್ತರು ಅರ್ಜಿಗಳನ್ನು ತಮ್ಮ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಿಮದ ಅಥವಾ ಇಲಾಖೆಯ ವೆಬ್‌ಸೈಟಿನಿಂದ ಪಡೆಯಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 25-10-2021 ರೊಳಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕಛೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.dwdsc.kar.nic.in ಹಾಗೂ ದೂರವಾಣಿ ಸಂಖ್ಯೆ: 080-22860907 ನ್ನು ಸಂಪರ್ಕಿಸಬಹುದಾಗಿದೆ.

## ಗ್ರಾಹಕ ಸಂವಾದ ಸಭೆ

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದ (ಬೆಸ್ಕಾಂ) ಎಲ್ಲಾ ಉಪವಿಭಾಗಗಳಲ್ಲಿ ಅಕ್ಟೋಬರ್ 16, 2021 ರಂದು ಮಧ್ಯಾಹ್ನ 3:00 ರಿಂದ 5:30 ರವರೆಗೆ ನಡೆಯುವ ಗ್ರಾಹಕ ಸಂವಾದ ಸಭೆಗಳಲ್ಲಿ, ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Customer Interaction Meeting

Bengaluru, october 11, (karnataka Information):

BESCOM Consumers are requested to participate in the Customer Interaction Meetings Scheduled on 16th October 2021 from 3:00 pm to 5:30 pm at all Sub-Divisions of BESCOM for redressal of electricity related issues by one to one interaction with BESCOM officials.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಅಕ್ಟೋಬರ್ 11 (ಕರ್ನಾಟಕ ವಾರ್ತೆ):

**ದಿನಾಂಕ: 11.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 26 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 50 | ಉತ್ತಮ | CO |
| 3 | ಕವಿಕ, ಮೈಸೂರುರಸ್ತೆ | 51 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 48 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 49 | ಉತ್ತಮ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 55 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 57 | ತೃಪ್ತಿಕರ | $PM_{10}$ |
| **(11.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 46 | ಉತ್ತಮ | $NO_2$ |
| 9 | ಪೀಣ್ಯ | * | * | * |

| | | | | |
|---|---|---|---|---|
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 11.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 26 | Good | $PM_{10}$ |
| 2 | Jayanagar 5th Block, Shalini ground | 50 | Good | CO |
| 3 | KAVIKA, Mysore Road | 51 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 48 | Good | CO |
| 5 | HSR Layout, near Central Silkboard | 49 | Good | $PM_{10}$ |
| 6 | City Railway Station, Magestic, Bengaluru | 55 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 57 | Satisfactory | $PM_{10}$ |
| **(11.10.2021 at 10.05 AM)** | | | | |
| 8 | BWSSB, Kadabesanahalli | 46 | Good | $NO_2$ |
| 9 | Peenya | * | * | * |
| 10 | BTM Layout | * | * | * |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |